# All India Radio: Bangalore
# Regional Bulletin In Kannada
# 09.12.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ
***************

ಮುಖ್ಯಾಂಶಗಳು

೧. ವಿಧಾನಮಂಡಲದ ಉಭಯ ಸದನಗಳಲ್ಲಿಂದು ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆ;ಸರ್ಕಾರದ ಗಮನ ಸೆಳೆದ ಪ್ರತಿಪಕ್ಷ ನಾಯಕರು

೨. ಸದನದ ಗೌರವವನ್ನು ಎತ್ತಿ ಹಿಡಿಯುವುದು ಪ್ರತಿಯೊಬ್ಬ ಸದಸ್ಯನ ಕರ್ತವ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಬೆಂಗಳೂರಿನಲ್ಲಿ ಕಸದ ಮಾಫಿಯಾ ನಿಯಂತ್ರಣಕ್ಕೆ ಬದ್ಧ - ಸದನದಲ್ಲಿ ಉಪಮುಖ್ಯಮಂತ್ರಿ ಭರವಸೆ

೪. ರಾಜ್ಯದ ಚಂದ್ರಶೇಖರ ವೈ ಶಿಲ್ಪಿ, ಆನಂದ ಬಾಬು ಮನೋಹರ್‌ಗೆ ರಾಷ್ಟ್ರೀಯ ಕರಕುಶಲ ಪ್ರಶಸ್ತಿ

೫. ಎತ್ತಿನಹೊಳೆ ಯೋಜನೆ ಅನುಷ್ಠಾನಕ್ಕೆ ಕೊರಟಗೆರೆಯಲ್ಲಿ ೧೫೧ ಎಕರೆ ಭೂಸ್ವಾಧೀನ ಪ್ರಕ್ರಿಯೆ ಶೀಘ್ರಗೊಳಿಸಲು ಜಿಲ್ಲಾಡಳಿತ ಸೂಚನೆ

***************

ವಿಧಾನಸಭೆಯಲ್ಲಿಂದು ಪ್ರತಿಪಕ್ಷ ನಾಯಕ ಆರ್. ಅಶೋಕ, ಉತ್ತರಕರ್ನಾಟಕ ಸಮಸ್ಯೆ ಬಗ್ಗೆ ಚರ್ಚಿಸಲು ನಿಲುವಳಿ ಸೂಚನೆಗೆ ಅವಕಾಶ ನೀಡಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಮಧ್ಯ ಪ್ರವೇಶಿಸಿದ ಕೃಷಿ ಸಚಿವ ಕೃಷ್ಣ ಬೈರೇಗೌಡ, ಪ್ರಶ್ನೋತ್ತರ ಕಲಾಪ ನಡೆಸಿದ ಬಳಿಕ, ಉತ್ತರಕರ್ನಾಟಕದ ಸಮಸ್ಯೆಗಳ ಚರ್ಚೆಗೆ ಅವಕಾಶ ಕಲ್ಪಿಸಬೇಕು ಎಂದು ಸಭಾಧ್ಯಕ್ಷರಿಗೆ ಮನವಿ ಮಾಡಿದರು.

ಇದೇ ವೇಳೆ ಮಾತನಾಡಿದ ಬಸನಗೌಡ ಪಾಟೀಲ ಯತ್ನಾಳ್, ಈ ಸದನದಲ್ಲಿ ನಿಜವಾಗಿ ವಿರೋಧಪಕ್ಷದ ನಾಯಕ ನಾನೇ ಎಂದು ಹೇಳಿದರು.

ಭೋಜನ ವಿರಾಮದ ಬಳಿಕ ಪ್ರತಿಪಕ್ಷ ನಾಯಕ ಆರ್. ಅಶೋಕ ರೈತರ ಆತ್ಮಹತ್ಯೆ ಸೇರಿದಂತೆ ಉತ್ತರಕರ್ನಾಟಕ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸಿದರು.

ಈ ವೇಳೆ ಮಧ್ಯ ಪ್ರವೇಶಿಸಿದ ಸಚಿವ ಕೃಷ್ಣ ಬೈರೇಗೌಡ, ಈ ವರ್ಷ ಪ್ರವಾಹ ಪೀಡಿತ ೧೪ ಲಕ್ಷ ಮಂದಿ ರೈತರಿಗೆ ೨ ಸಾವಿರದ ೨೪೯ ಕೋಟಿ ರೂಪಾಯಿ ಪರಿಹಾರ ನೀಡಲಾಗಿದೆ. ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದರೂ ಹಣ ಬಿಡುಗಡೆ ಮಾಡಿಲ್ಲ ಎಂದು ತಿಳಿಸಿದರು.

ಈ ವೇಳೆ ಆಡಳಿತ ಹಾಗೂ ಪ್ರತಿಪಕ್ಷ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು ೧೦ ನಿಮಿಷಗಳ ಕಾಲ ಸದನವನ್ನು ಮುಂದೂಡಲಾಯಿತು.

ಬಳಿಕ, ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ಸದನದ ಸಭಾ ನಾಯಕರು ಹಾಗೂ ಪ್ರತಿಪಕ್ಷ ನಾಯಕರು ಮಾತನಾಡುವಾಗ ಮಧ್ಯ ಪ್ರವೇಶಿಸಿ ಮಾತನಾಡುವುದು ಸರಿಯಲ್ಲ, ಸದನದ ಗೌರವ ಕಾಪಾಡುವುದು ಎಲ್ಲರ ಕರ್ತವ್ಯವಾಗಿದೆ ಎಂದು ಸಲಹೆ ನೀಡಿದರು.

ಯಾರೇ ಆದರೂ ಚರ್ಚೆ ಅಡ್ಡಿ ಪಡಿಸಬಾರದು ಎಂದು ಸದಸ್ಯರಿಗೆ ಕಿವಿ ಮಾತು ಹೇಳಿದರು.

***************

ವಿಧಾನ ಪರಿಷತ್‌ನಲ್ಲಿಂದು ಭೋಜನ ವಿರಾಮದ ಬಳಿಕ ಸದನ ಸಮಾವೇಶ ಗೊಂಡಾಗ ಉಪ ಸಭಾಪತಿ ಪ್ರಾಣೇಶ್ ಅವರು, ಉತ್ತರ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚೆಗೆ ಅವಕಾಶ ನೀಡಿದರು.

ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ, ಚರ್ಚೆ ಆರಂಭಿಸಿ ಉತ್ತರ ಕರ್ನಾಟಕ ಭಾಗದಲ್ಲಿ ಉಂಟಾದ ಅತಿವೃಷ್ಟಿಯಿಂದಾಗಿ ಅಪಾರ ಪ್ರಮಾಣದ ಬೆಳೆಗಳು ಹಾನಿಯಾಗಿದ್ದು, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಅವರ ನೆರವಿಗೆ ಸರ್ಕಾರ ಧಾವಿಸಬೇಕು. ಈ ವಿಚಾರದಲ್ಲಿ ಸರ್ಕಾರ ತನ್ನ ಜವಾಬ್ದಾರಿ ಯನ್ನು ನಿಭಾಯಿಸುವಲ್ಲಿ ವಿಫಲವಾಗಿದೆ ಎಂದು ದೂರಿದರು.

ಮೆಕ್ಕೆಜೋಳ ಖರೀದಿಗೆ ಕನಿಷ್ಠ ಬೆಂಬಲ ಘೋಷಣೆ ಮಾಡುವಲ್ಲಿಯೂ ವಿಳಂಬ ಧೋರಣೆ ಅನುಸರಿಸಲಾಗಿದೆ ಎಂದು ಹೇಳಿದರು. ಬಳಿಕ ಬಿಜೆಪಿಯ ಸಿ.ಟಿ.ರವಿ ಮಾತನಾಡಿ, ಅತಿ ವೃಷ್ಟಿಯಿಂದ ಬಾಧಿತ ರೈತರ ಸಮಸ್ಯೆಗಳಿಗೆ ಸರ್ಕಾರ ಸಕಾಲದಲ್ಲಿ ಸ್ಪಂದಿಸುವ ಕೆಲಸ ಮಾಡಿಲ್ಲ. ಪ್ರತಿಯೊಂದು ವಿಚಾರಕ್ಕೂ ಕೇಂದ್ರ ಸರ್ಕಾರದ ಕಡೆ ಬೊಟ್ಟು ಮಾಡುವುದು ಸರಿಯಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

***************

ಬೆಂಗಳೂರಿನಲ್ಲಿ ಖಾತೆ ವಿಲೇವಾರಿಗೆ ತಂದಿದ್ದ ರೌಂಡ್ ರಾಬಿನ್ ಪದ್ಧತಿಯನ್ನು ರದ್ದು ಮಾಡಲಾಗಿದ್ದು, ಜಿಬಿಎ ವ್ಯಾಪ್ತಿಯಲ್ಲಿ ಇ-ಖಾತೆ ಅರ್ಜಿಗಳನ್ನು ಹಳೆ ಪದ್ಧತಿಯಲ್ಲಿ ವಿಲೇವಾರಿ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ವಿಧಾನಸಭೆಯಲ್ಲಿ ಮಾತನಾಡಿದ ಅವರು, ಜಿಬಿಎ ವ್ಯಾಪ್ತಿಯಲ್ಲಿ ಸಂಗ್ರಹವಾಗುವ ಕಸ ಸಂಸ್ಕರಿಸಲು ಎರಡು ಘಟಕಗಳನ್ನು ಸ್ಥಾಪಿಸಿ ನೂತನ ತಂತ್ರಜ್ಞಾನದ ಮೂಲಕ ವೈಜ್ಞಾನಿಕ ಕಸ ವಿಲೇವಾರಿ ಮಾಡಲಾಗುವುದು ಎಂದು ಹೇಳಿದ್ದಾರೆ.

ಇದೇ ವೇಳೆ ಕಸದ ಮಾಫಿಯಾ ತಡೆಯಲು ಕಾನೂನಿನಲ್ಲಿ ಏನೆಲ್ಲಾ ಅವಕಾಶವಿದೆ ಎಂಬುದನ್ನು ಬಳಸಿಕೊಳ್ಳಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

ಮಂಗಳೂರಿನಲ್ಲಿ ರೇಷ್ಮೆ ಹುಳ ಮಾದರಿಯ ಬ್ಲಾಕ್ ಸೋಲ್ಜರ್ ಫ್ಲೈ ಬಳಸಿಕೊಂಡು ಕಸವನ್ನು ಗೊಬ್ಬರ ಮಾಡಲಾಗುತ್ತಿದೆ. ಈ ಪ್ರಯೋಗವನ್ನು ಬೆಂಗಳೂರಿನಲ್ಲಿ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

***************

ಕರಕುಶಲ ಕ್ಷೇತ್ರದಲ್ಲಿ ಸಾಧನೆ ಮಾಡಿದ ಕಲಾವಿದರಿಗೆ ೨೦೨೩-೨೪ನೇ ಸಾಲಿನ ಪ್ರತಿಷ್ಠಿತ ಪ್ರಶಸ್ತಿಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ದೆಹಲಿಯಲ್ಲಿಂದು ಪ್ರದಾನ ಮಾಡಿದರು. ಕಾರ್ಯಕ್ರಮದಲ್ಲಿ ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ಮತ್ತಿತರ ಗಣ್ಯರು ಪಾಲ್ಗೊಂಡಿದ್ದರು.

ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೨೩ ಕರಕುಶಲಕರ್ಮಿಗಳಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

೨೦೨೪ರ ರಾಷ್ಟ್ರೀಯ ಕರಕುಶಲಕರ್ಮಿ ಪ್ರಶಸ್ತಿಯನ್ನು ಮರದ ಶಿಲ್ಪ ಕೆತ್ತನೆ ವಿಭಾಗದಲ್ಲಿ ರಾಜ್ಯದ ಚಂದ್ರಶೇಖರ ವೈ ಶಿಲ್ಪಿ ಹಾಗೂ ಬೆಳ್ಳಿಕ್ರಾಫ್ಟ್ ಡಿಸೈನರ್ ಆನಂದ ಬಾಬು ಮನೋಹರ್ ಅವರಿಗೆ ನೀಡಲಾಗಿದೆ.

ಕಲಬುರಗಿ ನಗರದ ಚಂದ್ರಶೇಖರ ವೈ ಶಿಲ್ಪಿ ಅವರು ಸಂಪ್ರಾದಾಯಿಕ ಕುಸುರಿ ಕೆತ್ತನೆಯಲ್ಲಿ ಪರಿಣತಿ ಹೊಂದಿದ್ದಾರೆ. ೪ ದಶಕಗಳಿಗಿಂತ ಶಿಲ್ಪಕಲೆ ದ್ವಾರ ಬಾಗಿಲಿನ ಕೆತ್ತನೆಯ ಮೂಲಕ ಪ್ರಸಿದ್ಧ ಪಡೆದಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿರುವ ಅವರು ಪ್ರಶಸ್ತಿ ದೊರೆತಿರುವುದಕ್ಕೆ ಸಂತಸ ವ್ಯಕ್ತಪಡಿಸಿದ್ದಾರೆ.

ಧ್ವನಿ : ಚಂದ್ರಶೇಖರ ವೈ ಶಿಲ್ಪಿ

***************

ಜಿಲ್ಲಾ ಕಂಬಳ ಸಮಿತಿಯಿಂದ ಅನುಮೋದನೆಗೊಂಡ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯ ೨೩ ಕಂಬಳೋತ್ಸವಗಳಿಗೆ ಸರ್ಕಾರದಿಂದ ತಲಾ ೫ ಲಕ್ಷ ರೂಪಾಯಿ ಅನುದಾನ ಬಿಡುಗಡೆ ಮಾಡುವುದಾಗಿ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್ ವಿಧಾನಸಭೆಗೆ ತಿಳಿಸಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ಪುತ್ತೂರು ಶಾಸಕ ಅಶೋಕ್ ಕುಮಾರ್ ರೈ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರ ನೀಡಿದ ಅವರು, ಪ್ರಸಕ್ತ ಸಾಲಿನಲ್ಲಿ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಆಯೋಜಿಸಲಾಗುವ ಕಂಬಳ ಉತ್ಸವಗಳಿಗೆ ಅನುದಾನ ಕೋರಿ ಪ್ರಸ್ತಾವನೆಗಳು ಸ್ವೀಕೃತವಾಗಿವೆ. ಇದಕ್ಕೆ ಸರ್ಕಾರದಿಂದ ಅನುಮೋದನೆ ನೀಡಿ ಅನುದಾನ ಬಿಡುಗಡೆಗೆ ಆರ್ಥಿಕ ಇಲಾಖೆ ಕಡತ ರವಾನಿಸಲಾಗಿದೆ ಎಂದು ಹೇಳಿದ್ದಾರೆ.

***************

ಎತ್ತಿನಹೊಳೆ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೊರಟಗೆರೆ ತಾಲ್ಲೂಕಿನಲ್ಲಿ ಬಾಕಿ ಉಳಿದಿರುವ ೧೫೧ ಎಕರೆ ಭೂಸ್ವಾಧೀನ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಲು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.P

ಭೂಸ್ವಾಧೀನ ಪ್ರಕ್ರಿಯೆಯನ್ನು ಆದಷ್ಟು ಬೇಗನೆ ಪೂರ್ಣಗೊಳಿಸಿ ಫಲಾನುಭವಿಗಳ ಖಾತೆಗೆ ನೇರವಾಗಿ ಹಣ ವರ್ಗಾವಣೆ ಮಾಡಲು ಕ್ರಮ ಕೈಗೊಳ್ಳಬೇಕೆಂದು ತಿಳಿಸಿದ್ದಾರೆ.

ಎತ್ತಿನಹೊಳೆ ಯೋಜನೆಗಾಗಿ ಕೊರಟಗೆರೆ ತಾಲ್ಲೂಕಿನಲ್ಲಿ ಒಟ್ಟು ೫೩೪ ಎಕರೆ ಜಮೀನು ಅಗತ್ಯ ವಿದ್ದು, ಈ ಪೈಕಿ ೩೮೩ ಎಕರೆ ಭೂಮಿ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿದೆ. ಫಲಾನುಭವಿಗಳ ಖಾತೆಗೆ ಈಗಾಗಲೇ ಹಣವನ್ನು ವರ್ಗಾಯಿಸಲಾಗಿದೆ.

***************

ಚಿಕ್ಕಮಗಳೂರು ಜಿಲ್ಲೆಯ ಬಾಳೆಹೊನ್ನೂರಿನ ಕಾಫಿ ಸಂಶೋಧನಾ ಸಂಸ್ಥೆ ಆರಂಭಗೊಂಡು ೧೦೦ ವರ್ಷಗಳನ್ನು ಪೂರೈಸಿದೆ. ಈ ಹಿನ್ನೆಲೆಯಲ್ಲಿ ೩ ದಿನ  ಶತಮಾನೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಭಾರತೀಯ ಕಾಫಿ ಮಂಡಳಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಕೂರ್ಮರಾವ್ ತಿಳಿಸಿದ್ದಾರೆ.

ಧ್ವನಿ : ಕೂರ್ಮರಾವ್

ಕಾಫಿ ಮಂಡಳಿ ಅಧ್ಯಕ್ಷರಾದ ದಿನೇಶ್ ದೇವೃಂದ ಮಾತನಾಡಿ ಕಾರ್ಯಕ್ರಮಕ್ಕೆ ಕೇಂದ್ರ ಸಚಿವರಾದ ಪಿಯೂಷ್ ಗೋಯಲ್, ಜಿತೇಂದ್ರ ಪ್ರಸಾದ್, ಪ್ರಹ್ಲಾದ್ ಜೋಷಿ ಸೇರಿದಂತೆ ಹಲವಾರು ಗಣ್ಯರನ್ನು ಆಹ್ವಾನಿಸಲಾಗಿದೆ ಎಂದು ಹೇಳಿದ್ದಾರೆ.

ಕಾಫಿ ಮಂಡಳಿಯಲ್ಲಿ ಕಾರ್ಯ ನಿರ್ವಹಿಸಿದ, ಪ್ರಸ್ತುತ ನಿರ್ವಹಿಸುತ್ತಿರುವ ಕೃಷಿ ವಿಜ್ಞಾನಿಗಳಿಗೆ ಸನ್ಮಾನ, ಕಾಫಿ ಕ್ಷೇತ್ರದಲ್ಲಿನ ಪರಿಣಿತರಿಂದ ಉಪನ್ಯಾಸ ಮತ್ತು ಕಾರ್ಯಗಾರ ಹಮ್ಮಿಕೊಳ್ಳಲಾಗಿದೆ.

***************

ರಾಜ್ಯ ಸರ್ಕಾರವು ಅಧಿವೇಶನದಲ್ಲಿ ರೈತರ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ವಹಿಸುವಂತೆ ಆಗ್ರಹಿಸಿ ನಗರದಲ್ಲಿ ಬಿಜೆಪಿ ರೈತ ಮೋರ್ಚಾ ನೇತೃತ್ವದಲ್ಲಿ ಕೋಲಾರದಲ್ಲಿ ಪ್ರತಿಭಟನೆ ನಡೆಯಿತು.

ತೋಟಗಾರಿಕೆ ಇಲಾಖೆಯ ಮುಂದೆ ಎತ್ತಿನ ಬಂಡಿಗಳ ಜೊತೆಗೆ ಆಗಮಿಸಿದ ಪ್ರತಿಭಟನಾಕಾರರು ತೋಟಗಾರಿಕೆ ಮತ್ತು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಿಗೆ ಮನವಿ ಸಲ್ಲಿಸಿದರು.

ರೈತರಿಗೆ ಸಹಕಾರಿ ಬ್ಯಾಂಕ್‌ಗಳ ಮೂಲಕ ಶೂನ್ಯ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ನೀಡುವ ಯೋಜನೆಯನ್ನು ಬಲಪಡಿಸಬೇಕು. ಪ್ರತಿ ರೈತನಿಗೂ ಗರಿಷ್ಠ ೧೦ ಲಕ್ಷದವರೆಗೆ ಶೂನ್ಯ ಬಡ್ಡಿ ಸಾಲ ಸೌಲಭ್ಯ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

***************

ಪ್ಲಾಸ್ಟಿಕ್‌ನಂತಹ ವಿಷಕಾರಿ ವಸ್ತು ಮಣ್ಣು, ನೀರು ಮತ್ತು ಗಾಳಿ ಇವುಗಳೊಂದಿಗೆ ಬೆರೆಯುವುದರಿಂದ ಜೀವಿಗಳ ಆರೋಗ್ಯಕ್ಕೆ ಕಟಂಕವಾಗಿದೆ ಎಂದು ಗದಗ ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಗಡಾದ ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಪ್ರತಿಯೊಬ್ಬರೂ ಪರಿಸರವನ್ನು ಜವಾಬ್ದಾರಿಯಿಂದ ರಕ್ಷಣೆ ಮಾಡಬೇಕು ಎಂದು ಸಲಹೆ ನೀಡಿದ್ದಾರೆ.

***************

ಕೇಂದ್ರ ಸರ್ಕಾರದ ಮಹತ್ವಕಾಂಕ್ಷೆಯ ಪ್ರಧಾನ ಮಂತ್ರಿ ಕುಸುಮ್ ಯೋಜನೆಯಡಿ ರೈತರು ಸೌರಶಕ್ತಿ ಘಟಕಗಳ ನಿರ್ಮಾಣಕ್ಕೆ ಗಮನಹರಿಸಬೇಕೆಂದು ದಾವಣಗೆರೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ವಿಠ್ಠಲ ಮಾಧವರಾವ್ ಸಲಹೆ ನೀಡಿದ್ದಾರೆ.

ದಾವಣಗೆರೆ ಜಿಲ್ಲೆ ಜಗಳೂರ ತಾಲೂಕಿನ ವಿವಿಧ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಜನರ ಅಹವಾಲು ಸ್ವೀಕರಿಸಿದ ಅವರು, ಕೃಷಿ ಉದ್ದೇಶಕ್ಕಾಗಿ ರೈತರು ತಮ್ಮದೇ ಜಮೀನುಗಳಲ್ಲಿ ಸೌರಶಕ್ತಿ

ಘಟಕಗಳನ್ನು ನಿರ್ಮಾಣ ಮಾಡಿಕೊಂಡರೆ ವಿದ್ಯುತ್ ಮೇಲಿನ ಅವಲಂಬನೆಯಿಂದ ಮುಕ್ತರಾಗಬಹುದು ಎಂದು ತಿಳಿಸಿದ್ದಾರೆ.

***************

ಬೆಂಗಳೂರಿನ ಕಸ್ತೂರಿನಗರ ಪ್ರದೇಶದ ಸಮಗ್ರ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲಾನ್ ಸಿದ್ಧಪಡಿಸಲು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ರಸ್ತೆಗಳು, ಪಾದಚಾರಿ ಮಾರ್ಗಗಳು, ಉದ್ಯಾನಗಳು ಸೇರಿದಂತೆ ಸಮಗ್ರ ಮೂಲಸೌಕರ್ಯ ಅಭಿವೃದ್ಧಿಗಾಗಿ ಸಮಗ್ರ ಮಾಸ್ಟರ್ ಪ್ಲಾನ್ ಸಿದ್ಧಪಡಿಸಬೇಕೆಂದು ಹೇಳಿದ್ದಾರೆ.

*******ಮುಕ್ತಾಯ*******